# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 161 |
| ಮಾನ್ಯ ಸದಸ್ಯರ ಹೆಸರು | ಶ್ರೀ.ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 16-07-2019 |
| ಉತ್ತರಿಸಬೇಕಾದ ಸಚಿವರು | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ಮಂಡ್ಯ ಜಿಲ್ಲೆಯಲ್ಲಿರುವ ಆರೋಗ್ಯ ಕೇಂದ್ರಗಳ ಮತ್ತು ಘಟಕಗಳ ಸಂಖ್ಯೆ ಎಷ್ಟು; | ಮಂಡ್ಯ ಜಿಲ್ಲೆಯಲ್ಲಿ ಒಟ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ: 116, ಪ್ರಸ್ತುತ ರಾಜ್ಯದಲ್ಲಿ ಯಾವುದೇ ಆರೋಗ್ಯ ಘಟಕಗಳು ಕಾರ್ಯನಿರ್ವಹಿಸುತ್ತಿಲ್ಲ. |
| (ಆ) | ಜಿಲ್ಲೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ವೈದ್ಯರ ಮತ್ತು ವೈದ್ಯಕೇತರ ಹುದ್ದೆಗಳು ಖಾಲಿ ಇರುವುದರಿಂದ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ |
| (ಇ) | ಹಾಗಿದ್ದಲ್ಲಿ, ಈ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು? (ವಿವರ ನೀಡವುದು) | ಈ ಸಮಸ್ಯೆಗಳನ್ನು ಪರಿಹರಿಸಲು ತೆಗೆದುಕೊಂಡ ಕ್ರಮದ ಬಗ್ಗೆ ಅನುಬಂಧದಲ್ಲಿ ನೀಡಲಾಗಿದೆ. |

ಆಕುಕ 02 ಎಸ್‌ಬಿವಿ 2019

(ಶಿವಾನಂದ ಎಸ್ ಪಾಟೀಲ)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು

**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ. ಎನ್.ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) ಇವರ ಚುಕ್ಕೆ ಗುರುತಿಲ್ಲದ ಪ್ರಸಂ: 161ಕ್ಕೆ ಅನುಬಂಧ**

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಲ್ಲಿ ಖಾಲಿ ಇರುವ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳು ಮತ್ತು ದಂತ ಆರೋಗ್ಯಾಧಿಕಾರಿಗಳ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಕ ಮಾಡಿಕೊಳ್ಳಲು ಸರ್ಕಾರಿ ಆದೇಶ ಸಂಖ್ಯೆ: ಆಕುಕ 297 ಹೆಚ್‌ಎಸ್‌ಹೆಚ್ 2015, ದಿನಾಂಕ:22-04-2016 ಮತ್ತು ಸೇರ್ಪಡೆ ದಿ:07.10.2016 ಹಾಗೂ ಆಕುಕ 359 ಹೆಚ್‌ಎಸ್‌ಹೆಚ್ 2016, ದಿನಾಂಕ:01-08-2016 ರಲ್ಲಿ ಆದೇಶಿಸಲಾಗಿದೆ (ಎಂಬಿಬಿಎಸ್ ವೈದ್ಯಾಧಿಕಾರಿಗಳ ಹುದ್ದೆಗೆ ಎದುರು ಆಯುಷ್ ವೈದ್ಯರ ನೇಮಕಾತಿ)

ತಜ್ಞ ವೈದ್ಯರನ್ನು "On Call Basis" ಮೇಲೆ ತೆಗೆದುಕೊಳ್ಳಲು ಸರ್ಕಾರದ ಆದೇಶ ಸಂಖ್ಯೆ:ಆಕುಕ 178 ಹೆಚ್‌ಎಸ್‌ಹೆಚ್ 2011 ದಿನಾಂಕ: 20-05-2016ರಲ್ಲಿ ಆದೇಶಿಸಲಾಗಿದೆ.

ಸರ್ಕಾರದ ಆದೇಶ ಸಂಖ್ಯೆ: ಆಕುಕ 554 ಹೆಚ್‌ಎಸ್‌ಹೆಚ್ 2016, ದಿನಾಂಕ: 22-11-2016 ರಲ್ಲಿ ಸೂಚಿತವಾದಂತೆ ತಜ್ಞ ವೈದ್ಯರುಗಳ ಎದುರು ಹುದ್ದೆಯಲ್ಲಿ ಎಂಬಿಬಿಎಸ್ ವೈದ್ಯರನ್ನು ಗುತ್ತಿಗೆ ಆಧಾರದ ಮೇಲೆ ನೇಮಕಾತಿ ಮಾಡಿಕೊಳ್ಳಲು ಆಯುಕ್ತರು, ಆರೋಗ್ಯ ಮತ್ತು ಕು.ಕ ಸೇವೆಗಳು, ಬೆಂಗಳೂರು ಸುತ್ತೋಲೆ ಸಂಖ್ಯೆ: ಜೆಆರ್‌ಓ(1ಎ)/101/2012-13, ದಿನಾಂಕ: 09-12-2016 ರಂತೆ ಆಯಾ ಜಿಲ್ಲೆಯ ಜಿಲ್ಲಾಧಿಕಾರಿಗಳು/ ಜಿಲ್ಲಾ ಆಕುಕ ಅಧಿಕಾರಿಗಳಿಗೆ ಅನುಮತಿ ನೀಡಲಾಗಿದೆ, ವೈದ್ಯರ ಪದವಿಯನ್ನು ಸರ್ಕಾರಿ ಕೋಟಾದಲ್ಲಿ ಪೂರ್ಣಗೊಳಿಸಿದ ವೈದ್ಯರುಗಳನ್ನು 1 ವರ್ಷ ಕಡ್ಡಾಯ ಗ್ರಾಮೀಣ ಸೇವೆಯಡಿಯಲ್ಲಿ ವೈದ್ಯರುಗಳನ್ನು ನೇಮಿಸಿಕೊಳ್ಳಲಾಗುತ್ತಿದೆ.

ಇಲಾಖೆಯ ವಿಶೇಷ ನೇರ ನೇಮಕಾತಿ ಸಮಿತಿ ಮುಖಾಂತರ 2017-18ನೇ ಸಾಲಿನಲ್ಲಿ ಮತ್ತು 2018-19 ನೇ ಸಾಲಿನಲ್ಲಿ ವಿವಿಧ ಅರೆ ವೈದ್ಯಕೀಯ ಹುದ್ದೆಗಳಲ್ಲಿ 2181 ಹುದ್ದೆಗಳನ್ನು ನೇಮಕಾತಿ ಮಾಡಿ ಆದೇಶ ಹೊರಡಿಸಲಾಗಿದೆ..

ಕಿರಿಯ ಆರೋಗ್ಯ ಸಹಾಯಕರು (ಮಹಿಳೆ)-30 ಹುದ್ದೆಗಳಿಗೆ ಪೊಲೀಸ್ ಪೂರ್ವಾಪರ/ಜಾತಿ ಸಿಂಧುತ್ವ/ಹೈ-ಕ ಮೀಸಲಾತಿ ಸಿಂಧುತ್ವ ವರದಿಗಳು ಪರಿಶೀಲನೆಯಲ್ಲಿದ್ದು, ಹಂತ ಹಂತವಾಗಿ ನೇಮಕಾತಿ ಆದೇಶ ನೀಡಲಾಗುವುದು. ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳು-62 ಹುದ್ದೆಗಳಿಗೆ ಹೊರರಾಜ್ಯದ ವಿಶ್ವವಿದ್ಯಾನಿಲಯಗಳಿಂದ ಪದವಿ ಪಡೆದಿರುವ ಅಭ್ಯರ್ಥಿಗಳ ಅಂಕಪಟ್ಟಿಗಳ ನೈಜತೆಯ ಬಗ್ಗೆ ಪತ್ರ ಬರೆಯಲಾಗಿದ್ದು, ಸ್ಪಷ್ಟ ಮಾಹಿತಿ ಬಂದ ನಂತರ ತಾತ್ಕಾಲಿಕ ಆಯ್ಕೆಪಟ್ಟಿ ತಯಾರಿಸಲಾಗುವುದು. ಹಾಗೂ 889 ಶುಶ್ರೂಷಕರ ಹುದ್ದೆಗಳನ್ನು ಭರ್ತಿ ಮಾಡಲು ಮಾನ್ಯ ಕರ್ನಾಟಕ ಆಡಳಿತ ನ್ಯಾಯಮಂಡಳಿಯಲ್ಲಿ ದಾವೆ ಹೂಡಿದ್ದು, ಸದರಿ ನ್ಯಾಯಾಲಯದಲ್ಲಿ ಅಂತಿಮ ತೀರ್ಪು ಬಂದಿದ್ದು, ಸದರಿ ತೀರ್ಪಿನ ಅನ್ವಯ ಪರಿಶೀಲಿಸಲಾಗುತ್ತಿದೆ. ಉಳಿದ 981 ಶುಶ್ರೂಷಕರ ಹುದ್ದೆಗಳಿಗೆ ನೇಮಕಾತಿ ಬಗ್ಗೆ ಅಭ್ಯರ್ಥಿಗಳ ಮೂಲ ದಾಖಲಾತಿಗಳ ಪರಿಶೀಲನೆಯಲ್ಲಿದ್ದು, ಶ್ರೀಘ್ರದಲ್ಲಿಯೇ ಅಂತಿಮ ಆಯ್ಕೆ ಪಟ್ಟಿ ಪ್ರಕಟಿಸಲಾಗುವುದು.

ಇಲಾಖೆಯಲ್ಲಿ ಖಾಲಿ ಇರುವ 353 ಪ್ರಥಮ ದರ್ಜೆ ಸಹಾಯಕರು ಮತ್ತು 428 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಕೆಪಿಎಸ್‌ಸಿ ಮುಖಾಂತರ ಭರ್ತಿಮಾಡಲು ಕ್ರಮ ಕೈಗೊಳ್ಳಲಾಗುತ್ತಿದೆ.